(2) ಪರೀಕ್ಷೆ ಆಗುತ್ತಿರುವ ಕಾಲದಲ್ಲಿ ಪರೀಕ್ಷಾ ಕೊಠಡಿಯನ್ನು ಬಂದಾವರ್ತಿ ಬಿಟ್ಟು ಬಂದನಂತರ ಪುನಹ ಪ್ರವೇಶಿಸಲು ಯಾವ ವಿದ್ಯಾರ್ಥಿಗೂ ಅವಕಾಶ ಉಂಟಾಗಲಾರದು, ಅಲ್ಲದೆ ತನ್ನ ಉತ್ತರ ಕಾಗದಗಳನ್ನು ಸಂಪೂರ್ತಿಯಾಗಿ ಕೊಟ್ಟ ವಿನಹ ಪರೀಕ್ಷಾ ಸ್ಥಳವನ್ನು ಬಿಟ್ಟು ಬರುವದಕ್ಕೆ ಸಹ ಅವಕಾಶ ಕೊಡುವದಿಲ್ಲವು.

(3) ಯಾವ ವಿದ್ಯಾರ್ಥಿಯೇ ಆಗಲಿ ಮತ್ತೊಬ್ಬ ವಿದ್ಯಾರ್ಥಿಯೊಡನೆ ಮಾತನಾಡುತ್ತಲಿದ್ದದ್ದಾಗಿಯಾಗಲಿ ಅಥವಾ ಇನ್ಯಾವ ವಿಧದಿಂದಲಾದರೂ ಬಳಸುತ್ತಿರುವದಾಗಿಯಾಗಲಿ ಕಂಡು ಹಿಡಿಯಲ್ಪಟ್ಟರೆ ಅಂಥಾ ವಿದ್ಯಾರ್ಥಿಯು ಕೂಡ್ಲೆ ಕೊಠಡಿಯಿಂದ ಹೊರಗೆ ಹೊರಡಿಸಲ್ಪಡುವನಲ್ಲದೆ ಸದರೀ ಸಂಗತಿಯು ಇನ್ಸ್ಪೆಕ್ಟರ ಜನರಲ್ ಸಾಹೇಬರವರಿಗೆ ರಿಪೋರ್ಟು ಮಾಡಲ್ಪಡುವುದು.

(4) ಪರೀಕ್ಷಾ ಕೊಠಡಿಯೊಳಕ್ಕೆ ಸ್ಲೇಟುಗಳನ್ನಾಗಲಿ, ರೂಲರುಗಳನ್ನಾಗಲಿ, ಪುಸ್ತಕಗಳನ್ನಾಗಲಿ, ಬರದ ಕಾಗದಗಳನ್ನಾಗಲಿ, ಅಥವಾ ಇನ್ಯಾವ ವಿಧವಾದ ಕಾಗದ ಪತ್ರಗಳನ್ನಾಗಲಿ, ತೆಗೆದುಕೊಂಡು ಹೋಗಲು ಯಾವ ವಿದ್ಯಾರ್ಥಿಗಳಿಗೂ ಯಾವ ಸಂದರ್ಭದಲ್ಲಿಯೂ ಅವಕಾಶ ಕೊಡಲ್ಪಡುವದಿಲ್ಲವು. ಯಾವ ವಿದ್ಯಾರ್ಥಿಯಾಗಲಿ ಈ ನಿಬಂಧನೆಗೆ ವಿರುದ್ಧವಾಗಿ ಆಚರಿಸುತ್ತಿರುವದಾಗಿಯಾಗಲಿ ಅಥವಾ ಇನ್ಯಾವ ಅಕೃತ್ಯಗಳನ್ನು ನಡೆಸುತ್ತಿರುವದಾಗಿಯಾಗಲಿ ಕಂಡು ಹಿಡಿಯಲ್ಪಟ್ಟರೆ ಅಂಥಾ ವಿದ್ಯಾರ್ಥಿಯು ಕೊಠಡಿಯಿಂದ ಹೊರಗೆ ಹೊರಡಿಸಲ್ಪಡುವಲ್ಲದೆ ಸದರೀ ನಡವಳಿತವು ಇನ್ಸ್ಪೆಕ್ಟರ ಜನರಲ್ ಸಾಹೇಬರವರಿಗೆ ರಿಪೋರ್ಟು ಮಾಡಲ್ಪಡುವುದು.

(5) ವಿದ್ಯಾರ್ಥಿಯು ತನ್ನ ಪತ್ರವನ್ನು ಪೂರೈಸಿದ ಮೇಲೆ ತನ್ನ ಸ್ಥಳದಲ್ಲಿಯೇ ಇದ್ದು ನಿಂತು ಸೂಪರಿಂಟೆಂಡೆಂಟರು ಕಾಗದಗಳನ್ನು ತೆಗದುಕೊಳ್ಳುವ ವರೆಗೂ ಹಾಗೆಯೇ ನಿಂತಿರತಕ್ಕದ್ದು; ಯಾವದನ್ನಾದರೂ ಕೇಳಲಪೇಕ್ಷಿಸುವ ಯಾವ ವಿದ್ಯಾರ್ಥಿಯೇ ಆಗಲಿ ಮೇಲೆ ಹೇಳಿದ ರೀತಿ ನಡೆಸತಕ್ಕದ್ದೇ ಹೊರ್ತು ತನ್ನ ಸ್ಥಳವನ್ನು ಸರ್ವಥಾ ಬಿಡಕೂಡದು.

(6) ವಿದ್ಯಾರ್ಥಿಯ ಹೆಸರು, ರಿಜಿಸ್ಟರ ನಂಬರಿ ಇವುಗಳನ್ನು ಬರೆಯದೇ ಕಳುಹಿಸಲ್ಪಟ್ಟ ಯಾವ ಪತ್ರಿಕೆಯೂ ಪರೀಕ್ಷಿಸಲ್ಪಡುವದಿಲ್ಲವು.

(7) ಪ್ರಶ್ನೆ ಪತ್ರಗಳು ವಿನಹ ಯಾವ ಕಾಗದಗಳನ್ನಾಗಲಿ ಪರೀಕ್ಷಾ ಕೊಠಡಿಯಿಂದ ಹೊರಗೆ ತೆಗದುಕೊಂಡು ಹೋಗಲು ವಿದ್ಯಾರ್ಥಿಗಳಿಗೆ ಅಪ್ಪಣೆ ಕೊಡುವದಿಲ್ಲವು.

(8) ವಿದ್ಯಾರ್ಥಿಗಳು ಕಾಗದಗಳನ್ನು ಹರಿಯದಂತೆಯೂ ಮತ್ತು ನೆಲದಮೇಲೆ ಕಾಗದಗಳನ್ನು ಬಿಸಾಡದಂತೆಯೂ ನಿಷೇಧಿಸಲ್ಪಟ್ಟಿರುತ್ತಾರೆ. ಕೆಟ್ಟುಹೋದ ವಿಸಿಪ್ಪ ಕಾಗದಗಳೂ ವಿದ್ಯಾರ್ಥಿಯು ಬರೆಯುತ್ತಲಿದ್ದ ಮೇಜಿನಮೇಲೆನೀ ಬಿಡಲ್ಪಡಬೇಕು.

ಎಚ್. ಜೆ. ಭಾಭಾ,
ಇನ್ಸ್ಪೆಕ್ಟರ ಜನರಲ್ ಆಫ್ ಎಡ್ಯುಕೇಷನ್.

ಕೋಲಾರ ಡಿಸ್ಟ್ರಿಕ್ಟ್.
ಅಬಸ್ಟ್ರಾಕ್ಟ್.

ಇಸ್ತಿಹಾರ್ನಾಮೆ, ತಾರೀಖು 27ನೆ ಆಗಸ್ಟು 1903ನೆ ಇಸವಿ.

ಮಾರ್ಜಿನ್ನಲ್ಲಿ ನಮೂದ್ಮಾಡಿ ಇರತಕ್ಕ ಜೋಡಿ ಮತ್ತು ಖಾಯಂಗುತ್ತಾ ಗ್ರಾಮಗಳು, ಆಯಾಯ ತಾಲ್ಲೂಕುಗಳಿಗೆ ಸಮ್ಮುಂಧಪಟ್ಟ ಅಮಲ್ದಾರ್ರುಗಳ ಆಫೀಸಿನಲ್ಲಿ 1903ನೆ ಇಸವಿ ಅಕ್ಟೋಬರ್ ಮಾಹೆ 15ನೆ ತಾ|| ದಿವಸ, ಸರ್ಕಾರಕ್ಕೆ ಬರಬೇಕಾದ ಜೋಡಿ ಮತ್ತು ಗುತ್ತಾ ಮೊಬಲಗು ಬಾಕೀಗೋಸ್ಕರ ಬಹಿರಂಗವಾಗಿ ಹರಾಜು ಮಾಡಿಸಲ್ಪಡುತ್ತವೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟಿದೆ.

1. ಮಾಲೂರು ತಾ|| ಲಕ್ಕೂರು ಹೋಬಳಿ ಜೋಡೀ ಗೋಣೂರು ಗ್ರಾಮ.
2. ಕೋಲಾರ ತಾ|| ವೇಮಗಲ್ ಹೋಬಳಿ ಖಾಯಂಗುತ್ತಾ ಬಾಲನಾಗೇನಹಳ್ಳಿ ಗ್ರಾಮ.
3. ಕೋಲಾರ ತಾ|| ವೇಮಗಲ್ ಹೋಬಳಿ ಖಾಯಂಗುತ್ತಾ ಗಿಡಜಂಪ್ಗಾಟೆ ಗ್ರಾಮ.

(ಹೆಚ್ಚು ತಪಶೀಲ್ ಬಗ್ಯೆ 10ನೆ ಮುರ್ಕುಂ 36ನೆ ನಂಬರ್ ಮೈಸೂರ ಗೆಜೆಟಿನ 2ನೆ ಭಾಗದ 481–479–480ನೆ ನಂಬರ್ ಪೇಜು ನೋಡತಕ್ಕದ್ದು.)

ಇಸ್ತಿಹಾರ್ನಾಮೆ, ತಾ|| 29ನೆ ಆಗಸ್ಟು 1903ನೆ ಇಸವಿ.

ಮಾರ್ಜಿನ್ನಲ್ಲಿ ನಮೂದು ಮಾಡಿ ಇರುವ ಇನಾಂ ಗ್ರಾಮಗಳು ಸರ್ಕಾರಕ್ಕೆ ಬರಬೇಕಾದ ಬಾಕೀಗೋಸ್ಕರವಾಗಿ 1903ನೆ ಇಸವಿ ಅಕ್ಟೋಬರು ಮಾಹೆ 15ನೆ ತಾರೀಖಿನ ದಿವಸ ತಾಲ್ಲೂಕು ಅಮಲ್ದಾರ್ರ ಕಛೇರಿಯಲ್ಲಿ ಬಹಿರಂಗವಾಗಿ ಹರಾಜು ಮಾಡಿಸಲ್ಪಡುತ್ತವೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟಿದೆ.

1. ಮಾಲೂರು ತಾಲ್ಲೂಕು ಲಕ್ಕೂರು ಹೋಬಳಿ ಜೋಡಿ ಮಿಣಸಂದ್ರ ಗ್ರಾಮ.
2. ಮಾಲೂರು ತಾಲ್ಲೂಕು ಲಕ್ಕೂರು ಹೋಬಳಿ ಜೋಡಿ ದೊಮ್ಮಲೂರು ಗ್ರಾಮ.
3. ಬವರಂಗಪೇಟೆ ತಾಲ್ಲೂಕು ಕ್ಯಾಸಂಬಳ್ಳಿ ಹೋಬಳಿ ಖಾಯಂಗುತ್ತಾ ಪೀಲಚರ ಗ್ರಾಮ.

(ಹೆಚ್ಚು ತಪಶೀಲ್ ಬಗ್ಯೆ 10ನೆ ಮುರ್ಕುಂ 36ನೆ ನಂಬರ್ ಮೈಸೂರ ಗೆಜೆಟಿನ 2ನೆ ಭಾಗದ 482–484–483ನೆ ನಂಬರ್ ಪೇಜು ನೋಡತಕ್ಕದ್ದು.)

ಎಫ್. ಸಿ. ಕಾರ್, ಡೆಪ್ಯುಟಿ ಕಮಿಷನರ್.